# ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಪಿಎಂ–ಸೂರಜ್ ರಾಷ್ಟ್ರೀಯ ಪೋರ್ಟಲ್ ಪ್ರಾರಂಭ



ಬಳ್ಳಾರಿ,ಮಾ–:ಪ್ರಧಾನಿ ಮಂತ್ರಿಗಳಾದ ನರೇಂದ್ರ ಮೋದಿ ಅವರು ಇಂದು, ಸಮಾಜದ ಕಟ್ಟಕಡೆಯ ವರ್ಗಗಳಿಗೆ ಸಾಲದ ಬೆಂಬಲವನ್ನು ಒದಗಿಸುವ ರಾಷ್ಟ್ರವ್ಯಾಪಿ ಉಪಕ್ರಮವಾದ 'ಪ್ರಧಾನ ಮಂತ್ರಿ ಸಾಮಾಜಿಕ್ ಉತ್ಥಾನ್ ಮತ್ತು ರೋಜ್ಗಾರ್ ಆಧಾರಿತ್ ಜನಕಲ್ಯಾಣ್' (ಪಿಎಂ–ಸೂರಜ್) ರಾಷ್ಟ್ರೀಯ ಪೋರ್ಟ ಲ್ ಅನ್ನು ಪ್ರಧಾನ ಮಂತ್ರಿ ಕಚೇರಿಯಿಂದ ವರ್ಚು ಯಲ್ ಮೂಲಕ ಚಾಲನೆ ನೀಡಿದರು. ಬಳಿಕ ಫಲಾನುಭವಿಗಳನ್ನುದ್ದೇಶಿಸಿ ವರ್ಚುವಲ್ ಸಂವಾದ ಮೂಲಕ ಮಾತನಾಡಿದ ಅವರು, ಪರಿಶಿಷ್ಟ ಜಾತಿ ವರ್ಗಗಳು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ನಮ್ಮ ಸರ್ಕಾರವು ಬದ್ಧವಾಗಿದೆ ಎಂದರು. ನಂತರ, ರಾಷ್ಟ್ರೀಯ ನಗಮಗಳ ಯೋಜನೆಯ (ಪರಿಶಿಷ್ಟ ಜಾತಿಗಳು, ಸಫಾಯಿ ಕರ್ಮಚಾರಿಗಳು ಮತ್ತು ಹಿಂದುಳಿದ ವರ್ಗಗಳ) ಫಲಾನುಭವಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ, ಫಲಾನುಭವಿಗಳ ಅಭಿಪ್ರಾಯ ಪಡೆದುಕೊಂಡರು.

*ಜಿಲ್ಲಾ ಮಟ್ಟದಲ್ಲಿ ಕಾರ್ಯಕ್ರಮ ವೀಕ್ಷಣೆ:* ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ಹಣಕಾಸು ಸೇವಾ ಇಲಾಖೆ ಮತ್ತು ರಾಜ್ಯ ಮಟ್ಟದ ಬ್ಯಾಂಕರ್ ಸಮಿತಿ ಇವರ ಆದೇಶದಂತೆ ಕೆನರಾ ಬ್ಯಾಂಕ್ ಜಿಲ್ಲಾ ಪ್ರಧಾನ ಕಚೇರಿ ವತಿಯಿಂದ ನಗರದ ಜಿಲ್ಲಾ ಪಂಚಾಯತ್ ನಜೀರ್ ಸಾಬ್ ಸಭಾಂಗಣದಲ್ಲಿ ಪ್ರಧಾನಮಂತ್ರಿ ಸೂರಜ್ ಪೋರ್ಟಲ್ ಚಾಲನೆ ಕಾರ್ಯಕ್ರಮ ವೀಕ್ಷಿಸಲು ಆಯೋಜಿಸಲಾಗಿತ್ತು. 'ಪಿಎಂ ಸೂರಜ್ ರಾಷ್ಟ್ರೀಯ ಪೋರ್ಟಲ್‌ನಂದ ಹಿಂದುಳಿದ ವರ್ಗದವರಿಗೆ ಆದ್ಯತೆ ನೀಡುವ ಮೂಲಕ ಸಾಮಾಜಿಕ ಬದ್ಧತೆಯನ್ನು ಕೇಂದ್ರ ಸರ್ಕಾರವು ಸಾಕಾರಗೊಳಿಸುತ್ತಿದೆ ಮತ್ತು ಸಮಾಜದ ಅತ್ಯಂತ ಅಂಚಿನಲ್ಲಿರುವ ವರ್ಗಗಳನ್ನು ಉನ್ನತೀಕರಿಸುವ ಗುರಿಯನ್ನು ಹೊಂದಿದೆ' ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಹೇಳಿದರು.ಕೆನರಾ ಬ್ಯಾಂಕ್ ಜಿಲ್ಲಾ ಮಾರ್ಗದರ್ಶಿ ವ್ಯವಸ್ಥಾಪಕ ಸೋಮನಗೌಡ ಐನಾಪುರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪಿಎಂ ಸೂರಜ್ ಪೋರ್ಟಲ್ ರಾಷ್ಟ್ರೀಯ ಪೋರ್ಟಲ್ ಆಗಿದೆ, ಇದು ಸಾಮಾಜಿಕ ಉನ್ನತಿ ಮತ್ತು ಉದ್ಯೋಗ ಮತ್ತು ಸಾರ್ವಜನಕ ಕಲ್ಯಾಣವನ್ನು ಆಧರಿಸಿದೆ. ಈ ಪೋರ್ಟಲ್ ಮೂಲಕ ಅರ್ಹರು ಸಾಲದ ಸಹಾಯವನ್ನು ಪಡೆಯಬಹುದು. ಈ ಪೋರ್ಟಲ್ ಮೂಲಕ ಜನರು ಸುಲಭವಾಗಿ ಸಾಲವನ್ನು ಪಡೆಯುಲು ಸಾಧ್ಯವಾಗಲಿದ್ದು, ಇದರಲ್ಲಿ 15 ಲಕ್ಷ ರೂ. ಗಳವರೆಗೆ ವ್ಯಾಪಾರ ಸಾಲಕ್ಕೆ ಅರ್ಜಿ ಸಲ್ಲಿಸಬಹುದು. ಬ್ಯಾಂಕ್‌ಗೆ ಭೇಟಿ ನೀಡುವ ಅಗತ್ಯ ಇರುವುದಿಲ್ಲ. ಈ ಪೋರ್ಟಲ್ ಮೂಲಕವೇ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಹೇಳಿದರು. ಪಿಎಂ ಸೂರಜ್ ಪೋರ್ಟಲ್ ಅಡಿಯಲ್ಲಿ, ಬ್ಯಾಂಕ್‌ಗಳು, ಬ್ಯಾಂಕಿಂಗ್ ಅಲ್ಲದ ಹಣಕಾಸು ಕಂಪನಗಳು, ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಮತ್ತು ಇತರ ಸಂಸ್ಥೆಗಳ ಮೂಲಕ ಅರ್ಹ ಜನರಿಗೆ ಸಾಲವನ್ನು ನೀಡಲಾಗುತ್ತದೆ ಎಂದರು.ಕಾರ್ಯಕ್ರಮದಲ್ಲಿ ಕೇಂದ್ರ ಸರಕಾರದ ಯೋಜನೆಗಳಡಿ ಸೌಲಭ್ಯ ಪಡೆದ 30 ಫಲಾನುಭವಿಗಳಿಗೆ ಸಾಲ ಮಂಜೂರಾತಿ ಪತ್ರ ವಿತರಣೆ ಮಾಡಲಾಯಿತು.ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಕರ್ನಾಟಕ ಗ್ರಾಮೀಣಾ ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕ ಹೆಚ್.ಕೆ.ಗಿರೆಡ್ಡಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸತೀಶ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಗಮದ ಭೀಮಪ್ಪ ಎನ್.ಎಸ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಫಲಾನುಭವಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕರುಗಳ ಆರೋಗ್ಯ ಬಗ್ಗೆ ಕಾಳಜಿ ವಹಿಸಬೇಕು– ಡಾ. ಮಹೋನ ಕಮತ



ಮೂಡಲಗಿ: 'ಕರುಗಳಿಗೆ ಜಂತು ನಾಶಕ ಔಷಧ ಮತ್ತು ರೋಗ ನಿರೋಧಕ ಲಸಿಕೆಯನ್ನು ಹಾಕುಸುವ ಮೂಲಕ ಅವುಗಳು ಅರೋಗ್ಯವಾಗಿ ಬೆಳೆಯುವಲ್ಲಿ ಕಾಳಜಿ ವಹಿಸಬೇಕು' ಎಂದು ಮೂಡಲಗಿ ಪಶುಆಸ್ಪತ್ರೆಯ ಸಹಾಯಕ ನಿರ್ದೇಶಕ ಡಾ. ಮಹೋನ ಕಮತ ಅವರು ಹೇಳಿದರು.

ಪಟ್ಟಣದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಪಶು ಆಸ್ಪತ್ರೆ ಹಾಗೂ ಲಯನ್ಸ್‌ಕ್ಲಬ್ ಮೂಡಲಗಿ ಪರಿವಾರದಿಂದ ಪಶ ಆಸ್ಪತ್ರೆಯಆವರಣದಲ್ಲಿ ಏರ್ಪಡಿಸಿದ್ದ ಆರೋಗ್ಯವಂತ ಕರುಗಳ ಪ್ರದರ್ಶನ, ಕರುಗಳಿಗೆ ಉಚಿತ ಜಂತು ನಾಶಕ ಔಷಧ, ಲವಣಾಂಶಗಳು ಪೊಟ್ಟಣ ವಿತರಣೆ ಹಾಗೂ ಕಂದುರೋಗ ನಿರೋಧಕ ಲಸಿಕೆ ಹಾಕುವ ಶಿಬಿರದ ಉದ್ಘಾಟಿಸಿ ಮಾತನಾಡಿದ ಅವರು ಕರುಗಳನ್ನು ಉತ್ತಮವಾಗಿ ಪಾಲನೆ, ಪೋಷಣೆ ಮಾಡಲು ಪ್ರೇರಣೆಗಾಗಿ ಪ್ರದರ್ಶನ ಮತ್ತು ಪ್ರೋತ್ಸಾಹದಾಯಕ ಬಹುಮಾನಗಳನ್ನು ನೀಡಲಾಗುತ್ತಿದೆಎಂದರು.ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ಎಂ.ಬಿ. ವಿಭೂತಿ ಅವರು ಮಾತನಾಡಿ ಜನಸಿದ ಕರುವಿಗೆ ಗಿಣ್ಣದ ಹಾಲನ್ನು ಕುಡಿಸುವುದರಿಂದ ಕರುಗಳು ಆರೋಗ್ಯ ಪೂರ್ಣವಾಗಿ ಬೆಳೆಯುತ್ತವೆ ಮತ್ತು ರೋಗ ನಿರೋಧಕ ಶಕ್ತಿಯನ್ನು ಹೊಂದುತ್ತವೆ ಎಂದರು. ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲಕರ ಮಾತನಾಡಿ ಕರುಗಳ ಪ್ರದರ್ಶನ ಏರ್ಪಡಿಸಿ ರೈತರಿಗೆ ಪ್ರೋತ್ಸಾಹಿಸುತ್ತಿರುವುದು ಶ್ಲಾಘನೀಯವಾಗಿದೆ. ಪಶು ಸಂಪತ್ತನ್ನು ಬೆಳೆಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.ಯನ್ಸ್‌ಕ್ಲಬ್ ಪರಿವಾರ ಅಧ್ಯಕ್ಷ ಶ್ರೀಶೈಲ್ ಲೋಕನ್ನವರ, ಕಾರ್ಯದರ್ಶಿ ಸುಪ್ರೀತ ಸೋನವಾಲಕರ, ಖಜಂಚಿ ಕೃಷ್ಣಾ ಕೆಂಪಸತ್ತಿ, ಪುರಸಭೆ ಸದಸ್ಯ ಈರಣ್ಣ ಕೊಣ್ಣೂರ, ಪಶುವೈದ್ಯರಾದ ಡಾ. ಶಶಿಕಾಂತ ಕೌಜಲಗಿ, ಡಾ. ಆರ್.ಕೆ. ಬಂಬಲವಾಡ, ಡಾ.ಸುರೇಶ ತಪಸಟ್ಟಿ, ಡಾ.ನೀಲಕಂಠ ಕಪ್ಪಲಗುದ್ದಿ, ಮಹಾದೇವ ಕೌಜಲಗಿ, ಡಾ.ಪ್ರಶಾಂತ ಕುರಬೇಟ, ಡಾ.ವಿನೋದ ಕಡಪಟ್ಟಿ, ಡಾ. ವಿಶ್ವನಾಥ ಹುಕ್ಕೇರಿ, ಡಾ.ಮಲ್ಲಿಕಾರ್ಜುನ ಧರ್ಮಟ್ಟಿ, ಡಾ. ಶಿವಾನಂದ ಉಮರಾಣಿ, ಬಾಲಶೇಖರ ಬಂದಿ, ಸಂಜಯ ಮೋಕಾಸಿ, ಪುಲಕೇಶ ಸೋನವಾಲಕರ, ಡಾ.ಪ್ರಕಾಶ ನೇಸೂರ, ಡಾ.ಯಲ್ಲಾಲಿಂಗ ಮುಳವಾಡ ಇದ್ದರು.ಶಿವಶಂಕರ ಶಾಬಣ್ಣವರ ಸ್ವಾಗತಿಸಿದರು, ಮಹಾಂತೇಶ ಹೊಸೂರ, ಸುರೇಶ ಆದಪ್ಪಗೋಳ ನಿರೂಪಿಸಿದರು, ಶಿವರುದ್ರ ಮಿಲ್ಲಾನಟ್ಟಿ ವಂದಿಸಿದರು. ಪ್ರೋತ್ಸಾಹ ಬಹುಮಾನ ವಿಜೇತ ಕರುಗಳು: ಎಮ್ಮೆ ಕರುಗಳು: ಸಾಹಿಬಲಾಲ ಗದ್ಯಾಳ ಕರು (ಪ್ರಥಮ), ವಿಲಾಸ ಸಣ್ಣಕ್ಕಿಕರು (ದ್ವಿತೀಯ), ಭೀಮರಾವತೋರಸ್ಕರ್‌ಕರು (ತೃತೀಯ). ಕಿಲಾರಿ: ಸುರೇಶ ಪಿರೋಜಿಕರು (ಪ್ರಥಮ), ಮಲ್ಲಿಕ ಢವಳೇಶ್ವರ (ದ್ವಿತೀಯ), ಹುಸೇನ ಶೇಖ (ತೃತೀಯ). ಮಿಶ್ರ ತಳಿ: ಇಬ್ರಾಹಿಂ ಹುಣಶ್ಯಾಳ ಕರು (ಪ್ರಥಮ), ವಿಷ್ಣು ದೇಸಾಯಿಕರು (ದ್ವಿತೀಯ), ವಕಾಸ ಬಂಡ್ರೋಳಿ ಕರು (ತೃತೀಯ). 'ಸರ್ವೋತ್ತಮಕರು' ಪ್ರಶಸ್ತಿಯನ್ನು ರವಿ ಭಾಗೋಜಿ ಕರುವಿಗೆ ಲಭಿಸಿತು.

## ಬಿಜೆಪಿ ಹೇಳುವುದೆಂದರೆ ಭೂತದ ಬಾಯಿಯಲ್ಲಿ ಭಗವದ್ಗೀತೆ ಉಲಿದಂತೆ – ಶಂಕರಗೌಡ ಪಾಟೀಲ ವ್ಯಂಗ್ಯ

ಬೆಳಗಾವಿ: ಭಾರತೀಯ ಜನತಾ ಪಾರ್ಟಿಯವರು ಕುಟುಂಬ ರಾಜಕಾರಣದ ಬಗ್ಗೆ ಮಾತನಾಡುವುದೆಂದರೆ ಭೂತದ ಬಾಯಿಯಲ್ಲಿ ಭಗವದ್ಗೀತೆ ಉಲಿದಂತೆ ಎಂದು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಶಂಕರಗೌಡ ಪಾಟೀಲ ಹೇಳಿದ್ದಾರೆ.

ಕುಟುಂಬ ರಾಜಕಾರಣ ಕುರಿತಂತೆ ಕಾಂಗ್ರೆಸ್ ವಿರುದ್ಧ ಬಿಜೆಪಿ ಕಾರ್ಯಕರ್ತರು ಫ್ಲೆಕ್ಸ್ ಅಳವಡಿಸುತ್ತಿರುವ ಕುರಿತು ಹೇಳಿಕೆ ನೀಡಿರುವ ಅವರು, ರಾಷ್ಟ್ರ ರಾಜಕಾರಣದಿಂದ ಹಳ್ಳಿ ರಾಜಕಾರಣದವರೆಗೂ ಕುಟುಂಬ ರಾಜಕಾರಣವನ್ನೇ ಮಾಡಿಕೊಂಡು ಬರುತ್ತಿರುವ ಬಿಜೆಪಿಯವರಿಗೆ ಈ ಬಗ್ಗೆ ಮಾತನಾಡಲು ಯಾವ ನೈತಿಕತೆ ಇದೆ? ಎಂದು ಪ್ರಶ್ನಿಸಿದ್ದಾರೆ. ಬಿ.ಎಸ್.ಯಡಿಯೂರಪ್ಪ ಅವರದ್ದು ಕುಟುಂಬ ರಾಜಕಾರಣವಲ್ಲವೇ? ಈಶ್ವರಪ್ಪನವರದ್ದು ಕುಟುಂಬ ರಾಜಕಾ ರಣವಲ್ಲವೇ? ಬೊಮ್ಮಾಯಿಯವರದ್ದು ಕುಟುಂಬ ರಾಜಕಾರಣವಲ್ಲವೇ? ಉದಾಸಿಯವರದ್ದು ಕುಟುಂಬ ರಾಜಕಾರಣವಲ್ಲವೇ? ಸಿದ್ದೇಶ್ವರ ಅವರದ್ದು ಕುಟುಂಬ ರಾಜಕಾರಣವಲ್ಲವೇ ಕತ್ತಿಯವರದ್ದು ಕುಟುಂಬ ರಾಜಕಾರಣವಲ್ಲವೇ? ಜಾರಕಿಹೊಳಿಯವರದ್ದು ಕುಟುಂಬ ರಾಜಕಾರಣವಲ್ಲವೇ? ಜೊಲ್ಲೆಯವರದ್ದು ಕುಟುಂಬ ರಾಜಕಾರಣವಲ್ಲವೇ? ಜೊತೆಗೆ, ಕುಟುಂಬ ರಾಜಕಾರಣವನ್ನೇ ಹೊದ್ದು ಮಲಗಿರುವ ಜಾತ್ಯತೀತ ಜನತಾದಳದೊಂದಿಗೆ ಸೇರಿಕೊಂಡು ಚುನಾವಣೆ ಎದುರಿಸುತ್ತಿರುವ ಬಿಜೆಪಿಯವರು ಕುಟುಂಬ ರಾಜಕಾರಣದ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಅವರು ಖಾರವಾಗಿ ಪ್ರತಿಕ್ರಿಯಿಸಿದ್ದಾರೆ. ಲಕ್ಷ್ಮೀ ಹೆಬ್ಬಾಳಕರ್ ಅವರು ಅತ್ಯಂತ ಕೆಳಮಟ್ಟದಿಂದ ರಾಜಕಾ ರಣದಲ್ಲಿ ಮೇಲೆ ಬಂದವರು. ಅವರ ಸಹೋದರರಾಗಿರುವ ಚನ್ನರಾಜ ಹಟ್ಟಿಹೊಳಿ ಹಾಗೂ ಮಗ ಮೃಣಾಲ ಹೆಬ್ಬಾಳಕರ್ ಅವರು ಕಳೆದ 10 ವರ್ಷಗಳಿಗಿಂತ ಹೆಚ್ಚಿನ ಸಮಯದಿಂದ ಕಾಂಗ್ರೆಸ್ ನಲ್ಲಿ ನಿಷ್ಠೆಯಿಂದ ಕೆಲಸ ಮಾಡಿದ್ದಾರೆ. ಸ್ವಂತ ಪ್ರತಿಭೆಯಿಂದ, ಹೋರಾಟದಿಂದ ಅವರು ರಾಜಕಾರಣದಲ್ಲಿ ಸ್ಥಾನ ಪಡೆದರೆ ಇದನ್ನು ಕುಟುಂಬ ರಾಜಕಾರಣ ಎನ್ನುವಂತೆ ಬಿಂಬಿಸುವುದು ಮೂರ್ಖತನದ ಪರಮಾವಧಿಯಲ್ಲದೆ ಇನ್ನೇನು ಎಂದು ಶಂಕರಗೌಡ ಪಾಟೀಲ ಪ್ರಶ್ನಿಸಿದ್ದಾರೆ.ಯಾವುದೇ ರಾಜಕೀಯ, ಸಾಮಾಜಿಕ ಕೆಲಸ ಮಾಡದೆ ಕೇವಲ ಅಪ್ಪನ ಹೆಸರಲ್ಲಿ, ಅಮ್ಮನ ಹೆಸರಲ್ಲಿ, ಅಣ್ಣನ ಹೆಸರಲ್ಲಿ ಟಿಕೆಟ್ ಪಡೆಯುವ ನೂರಾರು ಜನರು ಬಿಜೆಪಿಯಲ್ಲಿರುವಾಗ, ಕುಟುಂಬದವರ ಹೆಸರಿನ ಮೇಲೆ ಬೇರೆ ಬೇರೆ ಹುದ್ದೆಗಳನ್ನು ಪಡೆಯುವ ಸಾವಿರಾರು ಉದಾಹರಣೆಗಳು ಬಿಜೆಪಿಯ ರಾಷ್ಟ್ರ ರಾಜಕಾರಣದಲ್ಲಿರುವಾಗ ಇಂತಹ ಬ್ಯಾನರ್, ಫ್ಲೆಕ್ಸ್ ಅಳವಡಿಸಿ ಬಿಜೆಪಿ ಅಪಹಾಸ್ಯಕ್ಕೀಡಾಗುತ್ತಿದೆ. ಬಿಜೆಪಿ ಮುಖಂಡರೆ ತಲೆತಗ್ಗಿಸುವಂತಾಗಿದೆ ಎಂದು ಅವರು ವ್ಯಂಗ್ಯವಾಡಿದ್ದಾರೆ.




# ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ,ಮಾ.–: 2024–25 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಪುರುಷ ಹಾಗೂ ಮಹಿಳಾ ರೈತ ಮಕ್ಕಳಿಗೆ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಮೆ.2 ರಿಂದ ಫೆ 28–2025ರ ವರೆಗೆ 10ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಅಹ್ವಾನಸಲಾಗಿದೆ. ಆಸಕ್ತರ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು, ತರಬೇತಿ ಬಯಸುವ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು, ಸ್ವಂತ ಸಾಗುವಳಿ ಮಾಡುತ್ತಿರಬೇಕು ಹಾಗೂ ಈ ಬಗ್ಗೆ ಪಹಣಿಯನ್ನು (RTC) ನೀಡುವುದು ಕಡ್ಡಾಯವಾಗಿರುತ್ತದೆ. ಅರ್ಹತೆಗಳು; ಸಾಮಾನ್ಯ ವರ್ಗದ ಅಭ್ಯರ್ಥಿಗೆ ಕನಿಷ್ಠ ವಯೋಮಿತಿ 18 ವರ್ಷ ಹಾಗೂ ಗರಿಷ್ಠ 30 ವರ್ಷಗಳು. ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡದ ಅಭ್ಯರ್ಥಿಗಳ ಕನಿಷ್ಠ ವಯೋಮಿತಿ 18 ವರ್ಷಗಳು ಹಾಗೂ ಗರಿಷ್ಠ 33 ವರ್ಷಗಳು ಮತ್ತು ಮಾಜಿ ಸೈನಿಕರಿಗೆ ಕನಿಷ್ಠ ವಯೋಮಿತಿ 33 ವರ್ಷಗಳು ಹಾಗೂ ಗರಿಷ್ಠ 65 ವರ್ಷಗಳಾಗಿರಬೇಕು. ಅರ್ಜಿಗಳನ್ನು ಮಾ. 30 ರ ವರೆಗೆ ಬೆಳಗಾವಿ (ಜಿ.ಪಂ) ತೋಟಗಾರಿಕೆ ಉಪನಿರ್ದೇಶಕರು ಹಾಗೂ ಬೆಳಗಾವಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಕಛೇರಿಯಲ್ಲಿ ಅಥವಾ ಇಲಾಖೆಯ website https://horticulturedir. karna taka.gov.in/ನಲ್ಲಿ Download ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಏ. 01 ರಂದು ಸಂಜೆ 5.30 ಗಂಟೆಯವರೆಗೆ ಬೆಳಗಾವಿ ಜಿ.ಪಂ ತೋಟಗಾರಿಕೆ ಉಪನಿರ್ದೇಶಕರು ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಬೆಳಗಾವಿ ರಾಣಿ ಚನ್ನಮ್ಮ ವೃತ್ತರವರಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಏ.06 ರಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ಬೆಳಗಾವಿ ರವರ ಕಛೇರಿಯಲ್ಲಿ ಮುಂಜಾನೆ 11 ಗಂಟೆಗೆ ನೇರವಾಗಿ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8197840 336, 8867887191 ಮತ್ತು 9742414741 ಗಳಿಗೆ ಸಂಪರ್ಕಿಸಿ ಸಹುದು. ಹಾಗೂ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾ ರಿಕೆ ನಿರ್ದೇಶಕರು (ಜಿ.ಪಂ) ರವರ ಕಛೇರಿಯಲ್ಲಿ ವಿಚಾರಿಸಬಹುದು ಎಂದು ಬೆಳಗಾವಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದೆ:ಶಾಸಕ ಬಾಬಾಸಾಹೇಬ್ ಪಾಟೀಲ



ಬೈಲಹೊಂಗಲ: ಚುನಾವಣಾ ಪೂರ್ವ ಕಾಂಗ್ರೆಸ್ ಪಕ್ಷ ಜನರಿಗೆ ಕೊಟ್ಟಂತ ಗ್ಯಾರಂಟಿ ಆಶ್ವಾಸನೆಗಳನ್ನು ಅಧಿಕಾರ ವಹಿಸಿಕೊಂಡ ನಂತರ ಜಾರಿಗೆ ತಂದ ಗೃಹಲಕ್ಷ್ಮೀ, ಶಕ್ತಿ, ಯುವ ನಿಧಿ,ಉಚಿತ ವಿದ್ಯುತ್,ಐದು ಕೆಜಿ ಅಕ್ಕಿ ಹಣ ಸಂದಾಯ ಯೋಜನೆಗಳಿಂದ ಸರ್ವ ಜನಾಂಗದ ಜನರಿಗೆ ಇವುಗಳ ಪ್ರಯೋಜನವಾಗಿದೆ ಎಂದು ಚನ್ನಮ್ಮನ ಕಿತ್ತೂರ ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದರು.ಅವರು ಬುಧವಾರ ನೇಸರಗಿ ಗ್ರಾಮದ ಶ್ರೀ ಚನ್ನವೃಷಬೇಂದ್ರ ಅಜ್ಜನವರ ಮಠದಲ್ಲಿ ತಾಲೂಕು ಆಡಳಿತ,ತಾಲೂಕ ಪಂಚಾಯತ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಕುರಿತು ನೇಸರಗಿ ಹೋಬಳಿ ಮಟ್ಟದ ಗ್ಯಾರಂಟಿ ಯೋಜನೆಗಳ ಸಮಾವೇಶದಲ್ಲಿ ಮಾತನಾಡಿ, ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು,ಬಡತನ ಸಮಸ್ಯೆಗಳಿಂದ ಹೊರಬರಲು ಗ್ಯಾರಂಟಿ ಯೋಜನೆಗಳು ರಾಜ್ಯದ ಜನರ ಪ್ರೀತಿಗೆ ಪಾತ್ರರಾಗಿವೆ ಎಂದರು. ತಹಶಿಲ್ದಾರ ಸಚ್ಚಿದಾನಂದ ಕುಚನೂರ, ತಾ.ಪಂ ಇಓ ಗಂಗಾಧರ ಕಂದಕೂರ, ಬಿಇಓ ಎ.ಎನ್.ಪ್ಯಾಟಿ, ಸಚೀನ ಪಾಟೀಲ, ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ.ಎಸ್ ಎಸ ಸಿದ್ದನ್ನವರ ಅನೇಕರು ಕೆಪಿಸಿಸಿ ಸದಸ್ಯೆ ರೋಹಿಣಿ ಪಾಟೀಲ, ಬ್ಲಾಕ ಕಾಂಗ್ರೆಸ್ ಅಧ್ಯಕ್ಷ ನಿಂಗಪ್ಪ ಅರಕೇರಿ ಸೇರಿದಂತೆ ಮತ್ತಿತರರು ಹಾಜರಿದ್ದರು.

ವರದಿ:ಈಶ್ವರ ಶಿಲ್ಲೇದಾರ.

# ಡಾ.ವಿಶ್ವನಾಥ ಪಾಟೀಲ ಬಿಜೆಪಿ ಗೆ ಸೇರ್ಪಡೆ



ಬೈಲಹೊಂಗಲ–ಬೆಂಗಳೂರಿನ ಬಿಜೆಪಿ ಕಾರ್ಯಾಲಯುದಲ್ಲಿ ಬೈಲಹೊಂಗಲದ ಮಾಜಿ ಶಾಸಕ ಡಾ. ವಿಶ್ವನಾಥ ಪಾಟೀಲ ಬಿಜೆಪಿಗೆಸೇರ್ಪಡೆಗೊಂಡಿದ್ದಾರೆ . ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ,ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಸಿ. ಟಿ ರವಿ ನೇತೃತ್ವದಲ್ಲಿ ಅವರನ್ನು ಪಕ್ಷದ ಶಾಲು ಹೊದಿಸಿ, ಪಕ್ಷದ ಬಾವುಟ ನೀಡಿ ಬರಮಾಡಿಕೊಂಡರು.ಈ ಸಂದರ್ಭದಲ್ಲಿ ಡಾ. ವಿಶ್ವನಾಥ ಪಾಟೀಲ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಅವರ ಜನಪರ ಆಡಳಿತ ವೈಖರಿಯನ್ನು ಮನಗಂಡು ಪಕ್ಷ ಸೇರ್ಪಡೆಗೊಂಡಿದ್ದೇನೆ ಮೂರನೇ ಬಾರಿ ಮೋದಿ ಯವರನ್ನು ಪ್ರಧಾನಿಯನ್ನಾಗಿಮಾಡಲು ಶ್ರಮಿಸುವುದಾಗಿ ತಿಳಿಸಿಮತಕ್ಷೇತ್ರದ ಎಲ್ಲೆಡೆ ಕಾರ್ಯಕರ್ತರ ತಂಡವನ್ನು ರಚಿಸಿ, ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಮನೆ ಮನೆಗೆ ತಲುಪಿಸಿ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪರ ಗೆಲುವಿಗೆ ಶ್ರಮಿಸುವುದಾಗಿ ಹೇಳಿದರು.

ವರದಿ:ಈಶ್ವರ ಶಿಲ್ಲೇದಾರ.

# ಹುಕ್ಕೇರಿಯಲ್ಲಿ ಎಸ್ಸಿಎಸ್ಟಿ ಬಡ ರೈತರ ಪ್ರತಿಭಟನೆ ಅಕ್ರಮ ಸಕ್ರಮದಡಿ ಸಾಗುವಳಿ ಹಕ್ಕು ಪತ್ರ ವಿತರಿಸಲು ಒತ್ತಾಯ



ಹುಕ್ಕೇರಿ : ಅಕ್ರಮ–ಸಕ್ರಮ ಯೋಜನೆಯಡಿ ಜಮೀನು ಮಂಜೂರು ಮಾಡಿ ಸಾಗುವಳಿ ಹಕ್ಕು ಪತ್ರ ವಿತರಿಸಬೇಕು ಎಂದು ಒತ್ತಾಯಿಸಿ ಗುರುವಾರ ಪಟ್ಟಣದಲ್ಲಿ ತಾಲೂಕಿನ ವಿವಿಧ ಗ್ರಾಮಗಳ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ದಲಿತ ರೈತರು ಪ್ರತಿಭಟನೆ ನಡೆಸಿದರು.

ಪ್ರವಾಸಿ ಮಂದಿರದಲ್ಲಿ ಜಮಾಯಿಸಿದ ದಲಿತ ಸಮಾಜದ ರೈತರು, ತಮ್ಮ ಬೇಡಿಕೆಯನ್ನು ಕೂಡಲೇ ಈಡೇರಿಸಬೇಕು. ಒಂದು ವೇಳೆ ವಿಳಂಬವಾದಲ್ಲಿ ಉಗ್ರ ಹೋರಾಟ ಮಾಡುವುದು ಅನಿವಾರ್ಯ ಎಂದು ಎಚ್ಚರಿಸಿದರು.

ತಾಲೂಕಿನ ಗುಡಸ, ಸಾರಾಪುರ, ಶಿರಹಟ್ಟಿ ಬಿ.ಕೆ., ರಕ್ಷಿ, ಹರಗಾಪುರ ಸೇರಿದಂತೆ ಇತರೆ ಗ್ರಾಮಗಳಲ್ಲಿ ಕಳೆದ ಎರಡು ದಶಕಕ್ಕೂ ಹೆಚ್ಚು ಕಾಲ ಸರ್ಕಾರಿ ಗಾಯರಾಣ, ಗೋಮಾಳ, ಅರಣ್ಯ ಇಲಾಖೆಯ ಜಮೀನನ್ನು ಸಾಗುವಳಿ ಮಾಡಿ ಜೀವನ ಸಾಗಿಸುತ್ತಿದ್ದೇವೆ. ಈ ಬಗ್ಗೆ ಈಗಾಗಲೇ ದಾಖಲೆಗಳನ್ನೂ ಸಹ ಸಲ್ಲಿಸಲಾಗಿದೆ. ಆದರೆ, ಇದುವರೆಗೆ ಜಮೀನು ಮಂಜೂರಾತಿ ಮಾಡುವಲ್ಲಿ ಸರ್ಕಾರ ಮೀನಾಮೇಷ ಎಣಿಸುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಆರ್ಥಿಕವಾಗಿ ಹಿಂದುಳಿದ ತಮಗೆ ಅಕ್ರಮ–ಸಕ್ರಮ ಯೋಜನೆಯಡಿ ಪ್ರತಿ ಕುಟುಂಬಗಳಿಗೆ ತಲಾ 2 ಎಕರೆಯಂತೆ ಜಮೀನುಗಳನ್ನು ಮಂಜೂರಾತಿಗೊಳಿಸಿ ಹಂಚಿಕೆ ಮಾಡಬೇಕು. ಅನೇಕ ವರ್ಷಗಳ ಸಾಗುವಳಿ ಜಮೀನುಗಳನ್ನು ಸಕ್ರಮಗೊಳಿಸಬೇಕು. ಈ ಮೂಲಕ ಸಂವಿಧಾನದ ಆಶಯದಂತೆ ಪ್ರತಿಯೊಬ್ಬರೂ ಭೂಮಿ ಪಡೆಯುವ ಹಕ್ಕನ್ನು ಜಾರಿಗೊಳಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಭೀಮವಾದ ದಲಿತ ಸಂಘರ್ಷ ರಾಜ್ಯ ಸಮಿತಿ ಸದಸ್ಯ ಕೆಂಪಣ್ಣಾ ಶಿರಹಟ್ಟಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮುಖಂಡರಾದ ಕೆ.ವೆಂಕಟೇಶ, ಲಕ್ಷ್ಮಣ ಹೂಲಿ, ಶಂಕರ ಖಾತೇದಾರ, ಮಹಾದೇವ ಪರಕಿ, ರೇಖಾ ಬಂಗಾರಿ, ಆರತಿ ಕಾಂಬಳೆ, ಮಹಾದೇವಿ ಪಾಟೀಲ, ಮಂಜುನಾಥ ಮಾನೆ, ಬಸವರಾಜ ಕಾಂಬಳೆ, ಮಹೇಶ ಮಾಳಗೆ, ರವೀಂದ್ರ ನಾವಿ, ಸುಭಾಶ ಕಾಂಬಳೆ, ಮಾರುತಿ ಶಿರಹಟ್ಟಿ, ಸುಖದೇವ ತಳವಾರ, ತುಳಸಾರಾಮ ಕಾಂಬಳೆ, ರಾಜೇಂದ್ರ ಕಾಂಬಳೆ, ಅಶೋಕ ಕಾಂಬಳೆ ಮತ್ತಿತರರು ಉಪಸ್ಥಿತರಿದ್ದರು. ಬಳಿಕ ಪ್ರವಾಸಿ ಮಂದಿರದಿಂದ ಕೋರ್ಟ್ ಸರ್ಕಲ್, ಘಟಪ್ರಭಾ ರಸ್ತೆ ಮೂಲಕ ಮಿನಿವಿಧಾನ ಸೌಧದವರೆಗೆ ತೆರಳಿದ ಪ್ರತಿಭಟನಾಕಾರರು ತಹಸೀಲದಾರರಿಗೆ ತಮ್ಮ ಬೇಡಿಕೆಯ ಮನವಿ ಸಲ್ಲಿಸಿದರು.

# ಅರಭಾವಿ ಮತ ಕ್ಷೇತ್ರದ ಸ್ವೀಪ್ ಸಮೀತಿಯಿಂದ ಮತದಾನ ಜಾಗೃತಿ ಅಭಿಯಾನಕ್ಕೆ ಚಾಲನೆ



ಮೂಡಲಗಿ: ಪಟ್ಟಣದ ತಾ.ಪಂ ಕಾರ್ಯಾಲಯದಲ್ಲಿ ಅರಭಾವಿ ಮತ ಕ್ಷೇತ್ರದ ಸ್ವೀಪ್ ಸಮೀತಿಯಿಂದ ಮತದಾನ ಜಾಗೃತಿಗೆ ಚಾಲನೆ ನೀಡಿದರು.ಸ್ವೀಪ್ ಸಮೀತಿಯ ಅಧ್ಯಕ್ಷ ಹಾಗೂ ತಾ.ಪಂ ಇಓ ನವೀನ 'ಪ್ರಸಾದ ಕಟ್ಟಿಮನಿ ಮತದಾನ ಜಾಗೃತಿಗೆ ಚಾಲನೆ ನೀಡಿ ಮಾತ 'ನಾಡಿ, ಬರುವ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೋಬ್ಬರು ತಮ್ಮ ಮತ ನೀಡುವ ಮೂಲಕ ಹಕ್ಕು ಚಲಾಯಿಸಿ ತಮ್ಮ ಅಕ್ಕ ಪಕ್ಕದಲ್ಲಿರು ಅರ್ಹ ಮತದಾರಿಗೆ ಮತದಾನ ಮಾಡಲು ಜಾಗೃತಿ ಮೂಡಿಸ ಬೇಕೆಂದರು.ಈ ಸಮಯದಲ್ಲಿ ತಾ.ಪಂ ಸಹಾಯಕ ನಿರ್ದೇಶಕರಾದ ಸಂಗಮೇಶ ರೊಡ್ಡನವರ, ಚಂದ್ರಶೇಖರ ಬಾರ್ಕಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಅಂಜನಾ ಗಚ್ಚಿ ಹಾಗೂ ಕಚೇರಿಯ ಸಿಬ್ಬಂದಿವರ್ಗದವರು ಇದ್ದರು

# ಸಾಲಭಾದೆ; ರೈತ ಆತ್ಮಹತ್ಯೆ



ಸವದತ್ತಿ: ಸಾಲಬಾಧೆಯಿಂದ ರೈತನೋರ್ವ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಸವದತ್ತಿ ತಾಲೂಕಿನ ಹಂಚಿನಾಳ ಗ್ರಾಮದಲ್ಲಿ ಈಚೆಗೆ ನಡೆದಿದೆ.

ಬಸಪ್ಪ ಫಕೀರಪ್ಪ ಮೊರಬದ (43) ಮೃತ ರೈತ. ಕೂಲಿ ಕೆಲಸ ಮಾಡಿಕೊಂಡಿದ್ದ ಬಸಪ್ಪ ಸನ್ 2019–20ರಲ್ಲಿ ಗ್ರಾಮದಲ್ಲಿರುವ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ನಲ್ಲಿ 3 ಲಕ್ಷ ರೂ. ಹಾಗೂ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ 1 ಲಕ್ಷ ರೂ. ಸಾಲ ಪಡದಿದ್ದ. ಸಾಲ ತೀರಿಸಲಾಗದೇ ಮನನೊಂದು, ಗ್ರಾಮದ ನೀಲಕಂಠಪ್ಪ ಪತ್ತಾರ ಎಂಬುವರ ಪಾಳು ಬಿದ್ದ ಮನೆಯಲ್ಲಿ ನೇಣು ಹಾಕಿಕೊಂಡು ಮೃತಪಟ್ಟಿದ್ದಾನೆ. ಈ ಬಗ್ಗೆ ಸವದತ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ.

# ವೀರೇಶ್ವರ ಶರಣರ ಮಹಾರಥೋತ್ಸವ



ಗದಗ: ತಾಲೂಕಿನ ನರಸಾಪೂರ ಗ್ರಾಮದ ನಾಲತವಾಡ ವೀರೇಶ್ವರ ಶರಣರ ಮಠದಲ್ಲಿ ವೀರೇಶ್ವರ ಶರಣರ ಮಹಾರಥೋತ್ಸವ ಭಕ್ತಜನಸಾಗರದ ಮಧ್ಯೆ ಗುರುವಾರ ಅದ್ದೂರಿಯಿಂದ ನೆರವೇರಿತು. ಶ್ರೀಮಠದ ಶಿವಕುಮಾರ ಶರಣರು ನೇತೃತ್ವ ವಹಿಸಿದ್ದರು.